# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 715 (722) |
| ಸದಸ್ಯರ ಹೆಸರು | : | ಶ್ರೀ ಪ್ರತಾಪಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19/09/2022 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಆದೇಶವನ್ನು ಸರ್ಕಾರ ಇದುವರೆಗೆ ಅನುಷ್ಠಾನ ಮಾಡದೇ ವಿಳಂಬ ಮಾಡಲು ಕಾರಣಗಳೇನು; | ರಾಜ್ಯದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಯನ್ನು ಒಳಗೊಂಡಂತೆ ಸಾರ್ವಜನಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ತಿದ್ದುಪಡಿ ಮಾಡುವ ಕುರಿತು ಈ ಹಿಂದೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರು ದಿನಾಂಕ:30/05/2018ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. |
| ಆ) | ಯಾವ ಕಾಲಮಿತಿಯೊಳಗೆ ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಆದೇಶವನ್ನು ಅನುಷ್ಠಾನಗೊಳಿಸಲಾಗುವುದು; | ಸದರಿ ಪ್ರಸ್ತಾವನೆಯ ಕುರಿತು ನಿಯಮಾನುಸಾರ ಪರಿಶೀಲಿಸಲಾಗಿದ್ದು, ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿನ ಕೆಲವು ಹುದ್ದೆಗಳ ನೇಮಕಾತಿ ವಿಧಾನ ಮತ್ತು ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆಯಲ್ಲಿ ಸ್ಪಷ್ಟತೆ ಹಾಗೂ ನಿಖರತೆ ಇಲ್ಲದೇ ಇರುವುದರಿಂದ ಈ ಹಿಂದೆ ಆಯುಕ್ತರು ಸಲ್ಲಿಸಿದ ಪ್ರಸ್ತಾವನೆಯನ್ನು ಸಮಗ್ರವಾಗಿ ಮರು ಪರಿಷ್ಕರಿಸಿ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆಯುಕ್ತರಿಗೆ ತಿಳಿಸಿದ್ದು, ಅದರಂತೆ ಮೊದಲಿಗೆ ಒಟ್ಟು 31 ವೃಂದಗಳಿಗೆ ಸಂಬಂಧಿಸಿದಂತೆ ಪರಿಷ್ಕೃತ ಪ್ರಸ್ತಾವನೆಯನ್ನು ದಿನಾಂಕ:18/04/2022ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.<br><br>ಈ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್ 97 ಎಸ್ಆರ್‌ಡಿ 2004 ದಿನಾಂಕ:08/10/2004, ಸಿಆಸುಇ 82 ಸೇನಿಡಿ 2006 ದಿನಾಂಕ:13/07/2007 ಮತ್ತು ಸುತ್ತೋಲೆ ಸಂಖ್ಯೆ :ಸಿಆಸುಇ 124 ಸೇನಿಡಿ 2012 ದಿನಾಂಕ :10/08/2012ರನ್ವಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಕುರಿತು ಕ್ರಮವಹಿಸಬೇಕಾಗಿದ್ದು, ಅದರಂತೆ ಸಮಗ್ರ ತಿದ್ದುಪಡಿ ಪ್ರಸ್ತಾವನೆ ಕುರಿತು ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳ ಇಲಾಖೆಗಳ ಸಹಮತಿ ಕೋರಲಾಗಿರುತ್ತದೆ.<br>ಈ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಮತ್ತು ಸಂಸದೀಯ ಮತ್ತು ಶಾಸನ ರಚನಾ ಇಲಾಖೆಯಿಂದ ಕೆಲವು ಮಾಹಿತಿಯನ್ನು ಒದಗಿಸುವಂತೆ ಕೋರಿದ್ದು, ಮಾಹಿತಿಯನ್ನು ನೀಡುವ ಕುರಿತು ಪರಿಶೀಲಿಸಿ ಕ್ರಮಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಇ) | "ಫಿಟ್ ಇಂಡಿಯಾ" "ಖೇಲೋ ಇಂಡಿಯಾ" ಕ್ರೀಡಾ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಯೋಗ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ಪ್ರತಿಯೊಂದು ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ದೈಹಿಕ ಶಿಕ್ಷಣ ಶಿಕ್ಷಕರು / ಉಪನ್ಯಾಸಕರ ಹುದ್ದೆಗಳಿಗೆ ನೇಮಕಾತಿ ಮಾಡಲು ಸರ್ಕಾರ ಈ ಕೂಡಲೆ ಕ್ರಮ ವಹಿಸುವುದೇ? | ರಾಜ್ಯದ ದೈಹಿಕ ಶಿಕ್ಷಣ ಶಿಕ್ಷಕರು / ಉಪನ್ಯಾಸಕರ ಹುದ್ದೆಗಳಿಗೆ ನೇಮಕಾತಿ ಮಾಡಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದ್ದು, ವಿವರ ಈ ಕೆಳಕಂಡಂತಿದೆ. |
| | | (ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಒಟ್ಟು 2120 ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್ -2 ಹುದ್ದೆಗಳನ್ನು ಭರ್ತಿ ಮಾಡಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ದಿನಾಂಕ : 02/12/2021ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಈ ಬಗ್ಗೆ ಆರ್ಥಿಕ ಇಲಾಖೆ ಸಹಮತಿ ಕೋರಲಾಗಿದೆ. |
| | | (ಆ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳ ಪೈಕಿ 200 ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು ಇವರ ಮೂಲಕ ಕ್ರಮವಹಿಸುವಂತೆ ಸರ್ಕಾರದ ಪತ್ರ ಸಂಖ್ಯೆ :ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿದೆ. |
| | | (ಇ) ಪದವಿ ಪೂರ್ವ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಖಾಲಿ ಇದ್ದು, ಇದರಲ್ಲಿ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು ಪ್ರಸ್ತಾವನೆಯನ್ನು ದಿನಾಂಕ :18/11/2021ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಕಳುಹಿಸಲಾಗಿದೆ. ಉಳಿದ 10 ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿಗಾಗಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಂದ ವ್ಯಕ್ತಿ ಪೂರ್ವೋತ್ತರ ದಸ್ತಾವೇಜುಗಳನ್ನು ಸಲ್ಲಿಸುವಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ದಿನಾಂಕ :01/08/2022ರಂದು ಪತ್ರ ಬರೆಯಲಾಗಿದ್ದು, ಅದರಂತೆ ನೇಮಕಾತಿ ಪ್ರಕ್ರಿಯೆಗೆ ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ:ಇಪಿ 102 ಡಿಎಆರ್ 2022

(ಬಿ.ಸಿ. ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು